## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 100 ಮಾನವ ದಿನಗಳನ್ನು ಪೂರೈಸಿದ ಕುಟುಂಬದ ಒಂದು ವಯಸ್ಕ ಸದಸ್ಯರಿಗೆ **"ಉನ್ನತಿ"** ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಿಸಲು ತಾಲ್ಲೂಕು ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸುವ ಬಗ್ಗೆ.

ಓದಲಾಗಿದೆ:
1. ಮಾನ್ಯ ಕಾರ್ಯದರ್ಶಿಗಳು, ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯರವರ ಅರೇ ಸರ್ಕಾರಿ ಪತ್ರ ಸಂಖ್ಯೆ: DO#J-11060/01/2019/318121 ದಿನಾಂಕ: 08-01-2020.
2. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ಬಿಡುಗಡೆಗೊಳಿಸಿರುವ ಉನ್ನತಿ ಯೋಜನೆಯ ಮಾರ್ಗಸೂಚಿ ಕೈಪಿಡಿ.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 148(7) ಉಖಾಯೋ 2018, ಬೆಂಗಳೂರು ದಿನಾಂಕ: 06-02-2020.
4. ದಿನಾಂಕ: 16-01-2021ರಂದು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಲ್ಲಿ ಉನ್ನತಿ ಯೋಜನೆಯ ಅನುಷ್ಠಾನದ ಕುರಿತು ಚರ್ಚಿಸಲು ನಡೆದ ರಾಜ್ಯ ಮಟ್ಟದ ಸಭೆಯ ನಡವಳಿ.

~~~~~~

***ಪ್ರಸ್ತಾವನೆ:***

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಳೆದ ಆರ್ಥಿಕ ಸಾಲಿನಲ್ಲಿ 100 ಮಾನವ ದಿನಗಳನ್ನು ಪೂರೈಸಿದ ಕುಟುಂಬದ ಒಂದು ವಯಸ್ಕ (18 ರಿಂದ 45 ವರ್ಷದ ವರೆಗಿನ) ಸದಸ್ಯರಿಗೆ ಜೀವನೋಪಾಯವನ್ನು ರೂಪಿಸಲು ಸಹಕಾರಿಯಾಗುವಂತೆ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕೃಷಿ ಹಾಗೂ ರೈತರ ಕಲ್ಯಾಣ ಸಚಿವರು ಭಾರತ ಸರ್ಕಾರರವರು ದಿನಾಂಕ: 19-12-2019ರಂದು ನವದೆಹಲಿಯಲ್ಲಿ **"ಉನ್ನತಿ"** ಯೋಜನೆಯನ್ನು ಜಾರಿಗೊಳಿಸಿರುವ ಬಗ್ಗೆ ಓದಲಾದ(1)ರಲ್ಲಿ ಪ್ರಸ್ತಾಪಿಸಿರುತ್ತಾರೆ.

ಸದರಿ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಮಹಾತ್ಮ ಗಾಂಧಿ ನರೇಗಾ ಯೋಜನೆ, ರಾಜ್ಯ ಗ್ರಾಮೀಣ ಜೀವನೋಪಾಯ ಸಂಸ್ಥೆ (SRLM) ಮತ್ತು ಕೃಷಿ ವಿಜ್ಞಾನ ಕೇಂದ್ರ (ಕೃಷಿ ಇಲಾಖೆ) ಹಾಗೂ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ (RSETIs) ಒಗ್ಗೂಡಿಸುವಿಕೆಯ ಮೂಲಕ ಆಯೋಜಿಸಲು ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಸೂಚಿಸಿರುತ್ತಾರೆ. **"ಉನ್ನತಿ"** ಯೋಜನೆಯು ಪೂರ್ಣ ಪ್ರಮಾಣದ ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, 2019-20ನೇ ಸಾಲಿನಿಂದಲೇ ದೇಶದಾದ್ಯಂತ ಅನುಷ್ಠಾನಿಸಲಾಗುತ್ತದೆ ಎಂಬುದಾಗಿ ಓದಲಾದ (1)ರಲ್ಲಿ ತಿಳಿಸಿರುತ್ತಾರೆ.

ಸದರಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಿಸುವ ನಿಟ್ಟಿನಲ್ಲಿ ಓದಲಾದ (3)ರಲ್ಲಿ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಸಮಿತಿಗಳನ್ನು ಈಗಾಗಲೇ ರಚಿಸಲಾಗಿದೆ. ಮುಂದುವರೆದು ಸದರಿ ಯೋಜನೆಯಡಿ ತರಬೇತಿಯನ್ನು ಪಡೆಯಲು ಆಸಕ್ತಿ ಹೊಂದಿದ ಗ್ರಾಮೀಣ ಭಾಗದ ಅರ್ಹ ಯುವಕ/ಯುವತಿಯರಿಗೆ ತರಬೇತಿ ಪೂರ್ವದಲ್ಲಿ ಸಮಾಲೋಚನೆಯನ್ನು ಸ್ಥಳೀಯವಾಗಿ ನಡೆಸಿದ ನಂತರದಲ್ಲಿ ತರಬೇತಿಯನ್ನು ಆಯೋಜಿಸುವುದು ಸೂಕ್ತವಾಗಿರುತ್ತದೆ.

ದಿನಾಂಕ: 16-01-2021ರಂದು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಲ್ಲಿ ಉನ್ನತಿ ಯೋಜನೆಯ ಅನುಷ್ಠಾನದ ಕುರಿತು ಚರ್ಚಿಸಲು ನಡೆದ ರಾಜ್ಯ ಮಟ್ಟದ ಸಮನ್ವಯ ಸಭೆಯಲ್ಲಿ ನಿರ್ಣಯಿಸಿದಂತೆ, ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ತಾಲ್ಲೂಕು ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸುವುದು ಅಗತ್ಯವಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

***ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 148(7) ಉಖಾಯೋ 2018, ಬೆಂಗಳೂರು ದಿನಾಂಕ: 30-01-2021***

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, "ಉನ್ನತಿ" ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಿಸುವ ನಿಟ್ಟಿನಲ್ಲಿ ಈ ಕೆಳಕಂಡಂತೆ ತಾಲ್ಲೂಕು ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಿದೆ.
~~~~~~

ತಾಲ್ಲೂಕು ಮಟ್ಟದ ಉಸ್ತುವಾರಿ ಸಮಿತಿ ವಿವರ:

| | | |
|---|---|---|
| 1 | ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ | ಅಧ್ಯಕ್ಷರು |
| 2 | ಭೋದಕರು–ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆ (RSETIs) | ಸದಸ್ಯರು |
| 3 | ಪ್ರತಿನಿಧಿಗಳು–ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರ | ಸದಸ್ಯರು |
| 4 | Cluster Facilitation Supervisor -ರಾಜ್ಯ ಗ್ರಾಮೀಣ ಜೀವನೋಪಾಯ ಸಂಸ್ಥೆ (SRLM) | ಸದಸ್ಯರು |
| 5 | ತಾಲ್ಲೂಕು IEC ಸಂಯೋಜಕರು, ಮಹಾತ್ಮ ಗಾಂಧಿ ನರೇಗಾ ಯೋಜನೆ | ಸದಸ್ಯರು |
| 6 | ಸಹಾಯಕ ನಿರ್ದೇಶಕರು – ಮಹಾತ್ಮ ಗಾಂಧಿ ನರೇಗಾ | ಸದಸ್ಯ ಕಾರ್ಯದರ್ಶಿ |

ತಾಲ್ಲೂಕು ಮಟ್ಟದ ಉಸ್ತುವಾರಿ ಸಮಿತಿಯ ಕಾರ್ಯಗಳು:

1. ರಾಜ್ಯ ಹಾಗೂ ಜಿಲ್ಲಾ ಮಟ್ಟದಿಂದ ಸ್ವೀಕೃತವಾದ ಯೋಜನೆಗೆ ಸಂಬಂಧಿಸಿದ ಸರ್ಕಾರಿ ಆದೇಶಗಳು/ನಡವಳಿಗಳಲ್ಲಿ (ನಿರ್ಣಾಯಗಳು) ತಿಳಿಸಿದ ಅಂಶಗಳನ್ನು ಪಾಲಿಸಿ ಕ್ರಮವಹಿಸುವುದು.
2. ತಾಲ್ಲೂಕು ಮಟ್ಟದಲ್ಲಿ ಅಂತರ್ ಇಲಾಖೆಗಳ ಸಮನ್ವಯತೆಯನ್ನು ಖಚಿತ ಪಡಿಸಿಕೊಳ್ಳುವುದು.
3. ಕೌಶಲ್ಯ ಯೋಜನೆಯಡಿ ಫಲಾನುಭವಿಗಳನ್ನು ಯೋಜನೆಯ ನಿಯಮಾನುಸಾರ ಆಯ್ಕೆ ಮಾಡಿ ಪಟ್ಟಿಯನ್ನು ಜಿಲ್ಲಾ ಉಸ್ತುವಾರಿ ಸಮಿತಿಗೆ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳುವುದು.
4. ತರಬೇತಿ ಪೂರ್ವದಲ್ಲಿ ಫಲಾನುಭವಿಗಳಿಗೆ ತರಬೇತಿ ಪೂರ್ವ ಸಮಾಲೋಚನೆಯನ್ನು ಸ್ಥಳೀಯವಾಗಿ ನಡೆಸುವುದು.
5. ತರಬೇತಿ ವೇಳಾಪಟ್ಟಿಯನ್ನು ಸಿದ್ಧಪಡಿಸಿ ಸಕಾಲದಲ್ಲಿ ತರಬೇತಿ ಆಯೋಜನೆಗೆ ಕ್ರಮವಹಿಸುವುದು.
6. ಕ್ಷೇತ್ರ ಮಟ್ಟದಲ್ಲಿ ಅನುಷ್ಠಾನದ ಸಮಯದಲ್ಲ ಕಂಡುಬರುವ ಸಮಸ್ಯೆಗಳು/ಅಡಚಣೆಗಳನ್ನು ಗುರುತಿಸಿ, ಅವುಗಳನ್ನು ಜಿಲ್ಲಾ ಸಮಿತಿಯ ಗಮನಕ್ಕೆ ತರುವುದು.
7. ಯೋಜನೆಯ ಪ್ರಕ್ರಿಯೆ/ಪ್ರಗತಿಗೆ ಅಗತ್ಯವಿರುವ ಸಂಬಂಧಪಟ್ಟ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ನಿರ್ದಿಷ್ಟವಾದ ಜವಾಬ್ದಾರಿಗಳನ್ನು ನಿಗಧಿಪಡಿಸುವುದು.
8. ಕೌಶಲ್ಯ ತರಬೇತಿ ಆಯೋಜನೆ ಸಂದರ್ಭದಲ್ಲಿ ತರಬೇತಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
9. ರಾಜ್ಯ ಹಾಗೂ ಜಿಲ್ಲಾ ಸಮಿತಿಯು ಕಾಲಕಾಲಕ್ಕೆ ಸೂಚಿಸುವ ಇತರೆ ಕಾರ್ಯಗಳನ್ನು ಕೂಡ ನಿರ್ವಹಿಸುವುದು.
10. ಸದರಿ ಸಮಿತಿಯು ಪ್ರತಿ ಮಾಹೆ ಸಭೆ ಸೇರಿ ಅಗತ್ಯ ಕ್ರಮಗಳ ಬಗ್ಗೆ ಚರ್ಚಿಸುವುದು ಹಾಗೂ ಯೋಜನೆಯ ಅನುಷ್ಠಾನದ ಪ್ರಗತಿ ಕುರಿತು ಜಿಲ್ಲಾ ಉಸ್ತುವಾರಿ ಸಮಿತಿಗೆ ವರದಿ ನೀಡುವುದು.

ಈ ಸರ್ಕಾರಿ ಆದೇಶದಲ್ಲಿ ತಿಳಿಸಿರುವ ಅಂಶಗಳಲ್ಲದೇ, ಓದಲಾದ (1) ಮತ್ತು ಓದಲಾದ (2)ರಲ್ಲಿ ಪ್ರಸ್ತಾಪಿಸಿರುವ "ಉನ್ನತಿ" ಯೋಜನೆಯ ಮಾರ್ಗಸೂಚಿಯನುಸಾರ ಅನುಷ್ಠಾನಿಸಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಶಿವಬಸಪ್ಪ ಎಂ) 30/1/24
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ.
2. ರಾಜ್ಯ ಕಾರ್ಯಕಾರಿ ಸಮಿತಿ ಮತ್ತು ಜಿಲ್ಲಾ ಉಸ್ತುವಾರಿ ಸಮಿತಿಯ ಎಲ್ಲಾ ಸದಸ್ಯರುಗಳಿಗೆ.
3. ಪ್ರಾದೇಶಿಕ ಆಯುಕ್ತರು, ಮೈಸೂರು, ಬೆಳಗಾವಿ, ಕಲಬುರಗಿ ಮತ್ತು ಬೆಂಗಳೂರು ವಿಭಾಗಗಳಿಗೆ.

4. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
6. ತಾಲ್ಲೂಕು ಉಸ್ತುವಾರಿ ಸಮಿತಿಯ ಎಲ್ಲಾ ಸದಸ್ಯರುಗಳಿಗೆ
7. ರಾಜ್ಯದ ಎಲ್ಲಾ ಜಿಲ್ಲೆಗಳ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
8. ರಾಜ್ಯದ ಎಲ್ಲಾ ಜಿಲ್ಲಾ ಮಟ್ಟದಲ್ಲಿ ಇರುವ ಅನುಷ್ಠಾನ ಇಲಾಖೆಗಳ ಅಧಿಕಾರಿಗಳಿಗೆ (ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಮೂಲಕ ನೀಡುವುದು).
9. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ಕಾರ್ಯದರ್ಶಿಗಳಿಗೆ (ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಮೂಲಕ ನೀಡುವುದು).

ಪ್ರತಿಯನ್ನು:

1. ಮಾನ್ಯ ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, 4ನೇ ಮಹಡಿ, 2ನೇ ದ್ವಾರ, 7ನೇ ಮಹಡಿ, 4ನೇ ದ್ವಾರ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, 2&3ನೇ ಮಹಡಿ, ವಿಕಾಸಸೌಧ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, 5ನೇ ಮಹಡಿ, 2ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, 6&7ನೇ ಮಹಡಿ, 2&3 ದ್ವಾರ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, 6ನೇ ಮಹಡಿ, 2ನೇ ದ್ವಾರ, ಬಹುಮಹಡಿ ಕಟ್ಟಡ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, 4ನೇ ಮಹಡಿ, 3ನೇ ದ್ವಾರ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, 4ನೇ ಮಹಡಿ, 3ನೇ ದ್ವಾರ, ಬಹುಮಹಡಿ ಕಟ್ಟಡ ಮತ್ತು 1ನೇ ಮಹಡಿ, ವಿಕಾಸಸೌಧ, ಬೆಂಗಳೂರು.
16. ಸರ್ಕಾರದ ಕಾರ್ಯದರ್ಶಿಗಳು(ಪಂರಾ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
17. ಸರ್ಕಾರದ ಕಾರ್ಯದರ್ಶಿಗಳು, ಸಣ್ಣ ನೀರಾವರಿ ಇಲಾಖೆ, 2&3ನೇ ಮಹಡಿ, ವಿಕಾಸಸೌಧ, ಬೆಂಗಳೂರು.
18. ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
19. ಆಯುಕ್ತರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
20. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
21. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
22. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
23. ಅಭಿಯಾನ ನಿರ್ದೇಶಕರು, ರಾಜ್ಯ ಗ್ರಾಮೀಣ ಜೀವನೋಪಾಯ ಸಂಸ್ಥೆ, SRLM, ಬೆಂಗಳೂರು.
24. ಸರ್ಕಾರದ ಉಪ ಕಾರ್ಯದರ್ಶಿಗಳು(ಸಚಿವ ಸಂಪುಟ), ವಿಧಾನಸೌಧ, ಬೆಂಗಳೂರು.

25. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
26. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಗ್ರಾಮೀಣ ಭವನ ಆನಂದರಾವ್ ವೃತ್ತ, ಬೆಂಗಳೂರು.
27. ಮುಖ್ಯ ಅಭಿಯಂತರರು, ಸಣ್ಣ ನೀರಾವರಿ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
28. ನಿರ್ದೇಶಕರು ಪಂಚಾಯತ್ ರಾಜ್ 1 & 2 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
29. ನಿರ್ದೇಶಕರು, ಎಎನ್‌ಎಸ್‌ಎಸ್‌ಐಆರ್‌ಡಿ, ಲಲಿತ ಮಹಲ್ ರಸ್ತೆ ಮೈಸೂರು.
30. ನಿರ್ದೇಶಕರು ಸುವರ್ಣ ಗ್ರಾಮೋದಯ ಮತ್ತು ಗ್ರಾಮೀಣ ಮೂಲಭೂತ ಸೌಲಭ್ಯಗಳು-1
31. ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಲಭ್ಯಗಳು-2
32. ನಿರ್ದೇಶಕರು ಗ್ರಾಮ ಸ್ವರಾಜ್, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು.
33. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ರಸ್ತೆ, ಬೆಂಗಳೂರು.
34. ನಿರ್ದೇಶಕರು, ಪೌರಾಡಳಿತ ಇಲಾಖೆ, ವಿಶ್ವೇಶ್ವರಯ್ಯ ಕಿರು ಗೋಪುರ, ಬೆಂಗಳೂರು.
35. ನಿರ್ದೇಶಕರು, ಯೋಜನೆ, ಉಸ್ತುವಾರಿ ಮತ್ತು ಮಾಹಿತಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
36. ನಿರ್ದೇಶಕರು, ಸಾಮಾಜಿಕ ಲೆಕ್ಕಪರಿಶೋಧನೆ ಇಲಾಖೆ, ಬೆಂಗಳೂರು.
37. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
38. ನಿರ್ದೇಶಕರು, (ದೂರು, ಗುಣ ನಿಯಂತ್ರಣ & ಮಾಹಿತಿ ಶಿಕ್ಷಣ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
39. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
40. ಸರ್ಕಾರದ ಉಪ ಕಾರ್ಯದರ್ಶಿಗಳು(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
41. ಜಂಟಿ ನಿರ್ದೇಶಕರು (ತೋಟಗಾರಿಕೆ/ತಾಂತ್ರಿಕ/ಆಡಳಿತ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
42. ಸಹಾಯಕ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
43. ಮುಖ್ಯ ಸಂಪಾದಕರು ಕರ್ನಾಟಕ ವಿಕಾಸ ಪತ್ರಿಕೆ. ಸದರಿ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದು.
44. ವಿಶೇಷ ಅಧಿಕಾರಿ, ಗಣಕ ಯಂತ್ರ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್ ಪೋರ್ಟಲ್‌ನಲ್ಲಿ ಅಳವಡಿಸುವುದು.
45. ರಾಜ್ಯದ ಎಲ್ಲಾ ಜಿಲ್ಲೆಗಳ ಓಂಬುಡ್ಸ್‌ಮನ್‌ಗಳು ಮತ್ತು ರಾಜ್ಯ/ಜಿಲ್ಲೆಗಳ ಎಲ್ಲಾ ಗುಣ ನಿಯಂತ್ರಕರಿಗೆ.
46. ಹೆಚ್ಚಿನ ಪ್ರತಿಗಳು/ರಕ್ಷಾ ಕಡತಕ್ಕೆ.